# Akashvani : Bangalore
# National Bulletin In Kannada
# 20.11.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.11.2024 / 7.35 am**

<><*<><>*><>

ಮುಖ್ಯಾಂಶಗಳು

೧. ಮಹಾರಾಷ್ಟ್ರದ ಎಲ್ಲಾ ೨೮೮, ಜಾರ್ಖಂಡ್‌ನ ೩೮ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ಪ್ರಗತಿಯಲ್ಲಿ

೨. ಯಶಸ್ವಿ ಬ್ರೆಜಿಲ್ ಪ್ರವಾಸದ ನಂತರ ಗಯಾನಕ್ಕೆ ಪ್ರಯಾಣ ಆರಂಭಿಸಿದ ಪ್ರಧಾನಿ ನರೇಂದ್ರ ಮೋದಿ

೩. ಗೋವಾದಲ್ಲಿ ಇಂದಿನಿಂದ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ

೪. ಮಹಿಳೆಯರ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ; ಫೈನಲ್‌ನಲ್ಲಿಂದು ಭಾರತ -ಚೀನಾ ಪೈಪೋಟಿ

<><*<><>*><>

ಮಹಾರಾಷ್ಟ್ರದ ಎಲ್ಲಾ ೨೮೮ ವಿಧಾನಸಭಾ ಕ್ಷೇತ್ರಗಳಿಗೆ ಇಂದು ಒಂದೇ ಹಂತದಲ್ಲಿ ಮತದಾನ ಆರಂಭಗೊಂಡಿದೆ. ಬೆಳಗ್ಗೆ ೭ ಗಂಟೆಯಿಂದ ಆರಂಭಗೊಂಡಿರುವ ಮಂತದಾನ ಸಂಜೆ ೬ ಗಂಟೆಯವರೆಗೆ ಮುಂದುವರಿಯಲಿದೆ. ಮುಂಬೈನ ರಾಜಭವನದಲ್ಲಿ ರಾಜ್ಯಪಾಲ ಸಿ.ಪಿ.ರಾಧಕೃಷ್ಣನ್, ತಮ್ಮ ಮತವನ್ನು ಚಲಾಯಿಸಿದರು. ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗ್ವತ್ ನಾಗಪುರದ ಮತಗಟ್ಟೆಯಲ್ಲಿ ತಮ್ಮ ಮತ ಚಲಾಯಿಸಿದರು. ೨೮೮ ವಿಧಾನಸಭಾ ಕ್ಷೇತ್ರಗಳಲ್ಲಿ ೪ ಸಾವಿರದ ೧೩೬ ಅಭ್ಯರ್ಥಿಗಳು ಕಣದಲಿದ್ದು, ಈ ಪೈಕಿ ೩ ಸಾವಿರದ ೭೭೧ ಪುರುಷ ಅಭ್ಯರ್ಥಿಗಳು ಮತ್ತು ೩೬೩ ಮಹಿಳಾ ಅಭ್ಯರ್ಥಿಗಳಿದ್ದಾರೆ. ಇದೇ ೨೩ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ವಿಧಾನಸಭಾ ಚುನಾವಣೆಯ ಜೊತೆಗೆ ನಾಂದೇಡ್ ಲೋಕಸಭಾ ಕ್ಷೇತ್ರಕ್ಕೂ ಉಪಚುನಾವಣೆ ನಡೆಯುತ್ತಿದೆ. ೨೦೧೯ರ ಲೋಕಸಭಾ ಚುನಾವಣೆಯಲ್ಲಿ ಮುಂಬೈನಲ್ಲಿ ಶೇಕಡ ೫೫.೪ ರಷ್ಟು ಮತದಾನವಾಗಿದ್ದು, ೨೦೨೪ ರಲ್ಲಿ ಶೇಕಡ ೫೨.೪ ಕ್ಕೆ ಕುಸಿದಿತ್ತು. ಆಕಾಶವಾಣಿಯೊಂದಿಗೆ ಮಾತನಾಡಿದ ಮಹಾರಾಷ್ಟ್ರ ರಾಜ್ಯ ಮುಖ್ಯ ಚುನಾವಣಾಧಿಕಾರಿ ಎಸ್.ಚೊಕ್ಕಲಿಂಗಂ, ರಾಜ್ಯದಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸಲು ಆಯೋಗ ಮುಂಬೈ ಮತ್ತು ಇತರೆಡೆಗಳಲ್ಲಿ ಸಂಘಟಿತ ಪ್ರಯತ್ನ ನಡೆಸುತ್ತಿದೆ ಎಂದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತಮ್ಮ ಯಶಸ್ವಿ ಬ್ರೆಜಿಲ್ ಪ್ರವಾಸದ ನಂತರ ಮೂರು ದಿನಗಳ ಭೇಟಿಗಾಗಿ ಗಯಾನಕ್ಕೆ ಪ್ರಯಾಣ ಆರಂಭಿಸಿದ್ದಾರೆ. ೧೯೬೮ರ ನಂತರ ಗಯಾನ ದೇಶಕ್ಕೆ ಭೇಟಿ

ನೀಡುತ್ತಿರುವ ಮೊದಲ ಭಾರತದ ಪ್ರಧಾನಿ ಎಂಬ ಹೆಗ್ಗಳಿಕೆಗೆ ನರೇಂದ್ರ ಮೋದಿ ಭಾಜನರಾಗಿದ್ದಾರೆ. ಗಯಾನ ಅಧ್ಯಕ್ಷ ಡಾ.ಮೊಹಮ್ಮದ್ ಇರ್ಫಾನ್ ಅಲಿ ಅವರೊಂದಿಗೆ ಜಾರ್ಜ್‌ಟೌನ್‌ನಲ್ಲಿ ಪ್ರಧಾನಿ ಮಾತುಕತೆ ನಡೆಸಲಿದ್ದಾರೆ. ಪ್ರಧಾನಮಂತ್ರಿಗಳು, ಎರಡನೇ ಕ್ಯಾರಿಕಾಮ್ ಇಂಡಿಯಾ ಶೃಂಗಸಭೆಯಲ್ಲಿ ಭಾಗಿಯಾಗಲಿದ್ದಾರೆ. ಅಲ್ಲದೆ, ಈ ಪ್ರದೇಶದೊಂದಿಗೆ ಭಾರತದ ದೀರ್ಘಕಾಲದ ಸ್ನೇಹ-ಸಂಬಂಧವನ್ನು ಮತ್ತಷ್ಟು ಹೆಚ್ಚಿಸಲು ಕ್ಯಾರಿಕಾಮ್ ಕೂಟದ ಸದಸ್ಯ ರಾಷ್ಟ್ರಗಳ ನಾಯಕರೊಂದಿಗೆ ಸಭೆಗಳನ್ನು ನಡೆಸಲಿದ್ದಾರೆ. ನಾಳೆ ಪ್ರಧಾನಿ, ಗಯಾನ ದೇಶದ ಸಂಸತ್ ಅನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಅಲ್ಲದೆ, ಭಾರತೀಯ ಸಮುದಾಯದೊಂದಿಗೂ ಸಂವಾದ ನಡೆಸಲಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ ನಡೆದ ಸುಸ್ಥಿರ ಅಭಿವೃದ್ಧಿ ಹಾಗೂ ಇಂಧನ ಪರಿವರ್ತನೆಯ ಜಿ-೨೦ ಶೃಂಗಸಭೆಯ ೩ನೇ ಅಧಿವೇಶನದಲ್ಲಿ ಭಾಗವಹಿಸಿದ್ದರು. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾತನಾಡಿ, ಅಂತರಾಷ್ಟ್ರೀಯ ಸೌರ ಮೈತ್ರಿ ಕೂಟ, ಒನ್ ವರ್ಡ್ - ಒನ್ ಸನ್ - ಒನ್ ಗ್ರಿಡ್ ಹಾಗೂ ಜಾಗತಿಕ ಜೈವಿಕ ಇಂಧನ ಮೈತ್ರಿ ಮುಂತಾದ ಉಪಕ್ರಮಗಳ ಮೂಲಕ ಜೀವನ ಕುರಿತ ವಾರಣಾಸಿ ತತ್ವಗಳನ್ನು ಮುಖ್ಯವಾಹಿನಿಗೆ ತಂದು ಎಲ್ಲರಿಗೂ ಸ್ವಚ್ಛ, ಹೆಚ್ಚು ಸುಸ್ಥಿರ ಭವಿಷ್ಯ ಖಚಿತಪಡಿಸುವ ಪ್ರಯತ್ನ ವೇಗಗೊಳಿಸುವ ಮಹತ್ವವನ್ನು ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ ಒತ್ತಿ ಹೇಳಿದರು. ನವದೆಹಲಿ ಜಿ-೨೦ ಶೃಂಗಸಭೆಯ ಸಂದರ್ಭದಲ್ಲಿ, ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ಮೂರು ಪಟ್ಟು ಹೆಚ್ಚಿಸಲು, ೨೦೩೦ ರ ವೇಳೆಗೆ ಇಂಧನ ದಕ್ಷತೆಯ ದರವನ್ನು ದ್ವಿಗುಣಗೊಳಿಸಲು ನಿರ್ಧರಿಸಲಾಗಿತ್ತು ಎಂದು ಪ್ರಧಾನಿ ಗಮನಸೆಳೆದರು. ಈ ಸುಸ್ಥಿರ ಅಭಿವೃದ್ಧಿ ಆದ್ಯತೆಗಳನ್ನು ಮುಂದಕ್ಕೆ ಕೊಂಡೊಯ್ಯುವ ಬ್ರೆಜಿಲ್ ನಿರ್ಧಾರ ಪ್ರಧಾನಿ ಸ್ವಾಗತಿಸಿದರು. ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಲು ಭಾರತ ಕೈಗೊಂಡಿರುವ ಕ್ರಮಗಳ ಕುರಿತು ಪ್ರಧಾನಮಂತ್ರಿಯವರು ತಮ್ಮ ಭಾಷಣದಲ್ಲಿ ವಿವರಿಸಿದರು. ಪ್ಯಾರಿಸ್ ಬದ್ಧತೆಗಳನ್ನು ಪೂರೈಸಿದ ಮೊದಲ ಜಿ-೨೦ ದೇಶ ಭಾರತ ಎಂಬ ಹೆಗ್ಗಳಿಕೆಯನ್ನು ಪ್ರಸ್ತಾಪಿಸಿದರು. ಭಾರತವು ೨೦೩೦ ರ ವೇಳೆಗೆ ೫೦೦ ಗಿಗಾ ವ್ಯಾಟ್ ನವೀಕರಿಸಬಹುದಾದ ಇಂಧನ ಉತ್ಪಾದಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಹೊಂದಿದ್ದು, ಈ ಪೈಕಿ ೨೦೦ ಗಿಗಾ ವ್ಯಾಟ್ ಅನ್ನು ಈಗಾಗಲೇ ಸಾಧಿಸಲಾಗಿದೆ ಎಂದು ಹೇಳಿದರು. ಜಾಗತಿಕ ದಕ್ಷಿಣದ, ವಿಶೇಷವಾಗಿ ಅಭಿವೃದ್ಧಿ ಹೊಂದುತ್ತಿರುವ ಸಣ್ಣ ದ್ವೀಪ ದೇಶಗಳ ಸುಸ್ಥಿರ ಅಭಿವೃದ್ಧಿ ಅಗತ್ಯಗಳಿಗೆ ಪ್ರಾಮುಖ್ಯತೆಯನ್ನು ನೀಡುವಂತೆ ಅವರು ಕರೆ ನೀಡಿದರು. ಗ್ಲೋಬಲ್ ಸೌತ್ ಶೃಂಗಸಭೆಯ ಮೂರನೇ ಧ್ವನಿಯಲ್ಲಿ ಭಾರತ ಘೋಷಿಸಿದ ಜಾಗತಿಕ ಅಭಿವೃದ್ಧಿ ಒಪ್ಪಂದವನ್ನು ಬೆಂಬಲಿಸುವಂತೆ ಅವರು ಸದಸ್ಯ ದೇಶಗಳನ್ನು ಒತ್ತಾಯಿಸಿದರು.

<><*<><>*><>

ಇಂದಿನಿಂದ ಇದೇ ೨೮ರವರೆಗೆ ಗೋವಾದಲ್ಲಿ ೫೫ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಯಲಿದೆ. ಈ ವರ್ಷದ ಚಿತ್ರೋತ್ಸವದಲ್ಲಿ ಆಸ್ಟ್ರೇಲಿಯಾವನ್ನು 'ಕಂಟ್ರಿ ಆಫ್ ಫೋಕಸ್' ಎಂದು ಗುರುತಿಸಲಾಗಿದ್ದು, ಆ ದೇಶದ ಚಲನಚಿತ್ರಗಳನ್ನು ವಿಶೇಷವಾಗಿ ಪ್ರದರ್ಶಿಸಲಾಗುತ್ತಿದೆ. ಇದೇ ಮೊದಲ ಬಾರಿಗೆ ಭಾರತೀಯ ಚಲನಚಿತ್ರದ ಅತ್ಯುತ್ತಮ ಚೊಚ್ಚಲ

ನಿರ್ದೇಶಕ ಪ್ರಶಸ್ತಿ ನೀಡುತ್ತಿರುವುದು  ಗಮನಾರ್ಹ. ಐಎಫ್ಎಫ್ಐನ ಇಂಡಿಯನ್ ಪನೋರಮಾ ವಿಭಾಗದಲ್ಲಿ ೨೫ ಚಲನಚಿತ್ರಗಳು ಮತ್ತು ೨೦ ನಾನ್-ಫೀಚರ್ ಚಲನಚಿತ್ರಗಳನ್ನು ಪ್ರದರ್ಶಿಸಲಾಗುತ್ತಿದೆ. ಗೋವಾ ಮುಖ್ಯಮಂತ್ರಿ ಡಾ.ಪ್ರಮೋದ್ ಸಾವಂತ್ ಅವರು ನಿನ್ನೆ ಡಾ.ಶ್ಯಾಮ ಪ್ರಸಾದ್ ಮುಖರ್ಜಿ ಕ್ರೀಡಾಂಗಣಕ್ಕೆ ಭೇಟಿ ನೀಡಿ ಸಿದ್ಧತೆಗಳ ಮೇಲ್ವಿಚಾರಣೆ ನಡೆಸಿದರು. ಆಕಾಶವಾಣಿಯೊಂದಿಗೆ ಮಾತನಾಡಿದ ಸಾವಂತ್, ಉದ್ಘಾಟನಾ ಸಮಾರಂಭಕ್ಕೆ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ ಎಂದರು. ಕೇಂದ್ರ ವಾರ್ತಾ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಾಜು, ಆಕಾಶವಾಣಿಯೊಂದಿಗೆ ಮಾತನಾಡಿ, ಈ ವರ್ಷದ ಐಎಫ್ಎಫ್ಐಗೆ ಹಲವು ಹೊಸ ವಿಷಯಗಳನ್ನು ಸೇರಿಸಲಾಗಿದೆ. ಚಿತ್ರೋತ್ಸವವನ್ನು ಯುವ ಚಲನಚಿತ್ರ ನಿರ್ಮಾಪಕರಿಗೆ ಸಮರ್ಪಿಸಲಾಗಿದೆ. ಕ್ರಿಯೇಟಿವ್ ಮೈಂಡ್ಸ್ ಆಫ್ ಟುಮಾರೊ ವೇದಿಕೆಯಲ್ಲಿ ೧೦೦ ಯುವ ಪ್ರತಿಭೆಗಳು ಸೃಜನಶೀಲತೆಯನ್ನು ಪ್ರದರ್ಶಿಸಲಿದ್ದಾರೆ ಈ ವರ್ಷ ೧೦೦ ದೇಶಗಳ ೪೦೦ ಕ್ಕೂ ಹೆಚ್ಚು ಚಲನಚಿತ್ರಗಳನ್ನು ಪ್ರದರ್ಶಿಸಲಾಗುವುದು ಎಂದು ಜಾಜು ವಿವರಿಸಿದರು.

<><*<><>*><>

ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೂ ಮುನ್ನ ಕೇಂದ್ರ ಸರ್ಕಾರ, ಇದೇ ತಿಂಗಳ ೨೪ ರಂದು ದೆಹಲಿಯಲ್ಲಿ ಸರ್ವಪಕ್ಷಗಳ ಸಭೆಯನ್ನು ಕರೆದಿದೆ. ಸಭೆಯಲ್ಲಿ, ಲೋಕಸಭೆ ಮತ್ತು ರಾಜ್ಯಸಭೆ ಅಧಿವೇಶನ ಸುಗಮವಾಗಿ ಕಾರ್ಯನಿರ್ವಹಿಸಲು ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳಿಂದ ಬೆಂಬಲವನ್ನು ಕೋರಲಿದೆ. ಚಳಿಗಾಲದ ಅಧಿವೇಶನ ಇದೇ ತಿಂಗಳ ೨೫ ರಿಂದ ಡಿಸೆಂಬರ್ ೨೦ ರವರೆಗೆ ನಡೆಯಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರನ್ ರಿಜಿಜು ಮಾಹಿತಿ ನೀಡಿದ್ದಾರೆ.

<><*<><>*><>

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ದೂರದೃಷ್ಟಿಗೆ ಅನುಗುಣವಾಗಿ ಗತಿ ಶಕ್ತಿ ವಿಶ್ವವಿದ್ಯಾಲಯ-ಜಿಎಸ್ವಿ ದೇಶ ಮತ್ತು ವಿಶ್ವದ ಅತ್ಯುತ್ತಮ ವಿಶ್ವವಿದ್ಯಾಲಯವಾಗಿ ಹೊರಹೊಮ್ಮಲಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಜಿಎಸ್ವಿಯ ಮೊದಲ ನ್ಯಾಯಾಲಯದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈಲ್ವೆ, ವಾಯುಯಾನ, ಹೆದ್ದಾರಿಗಳು, ಹಡಗು, ರಕ್ಷಣೆ ಸೇರಿದಂತೆ ಸಾರಿಗೆ ಮತ್ತು ಲಾಜಿಸ್ಟಿಕ್ಸ್ ಕ್ಷೇತ್ರಗಳಲ್ಲಿ ಉದ್ಯೋಗ ಕೇಂದ್ರಿತ ಕೋರ್ಸ್‌ಗಳನ್ನು ಜಿಎಸ್ವಿ ನೀಡುತ್ತದೆ ಎಂದು ತಿಳಿಸಿದರು. ಭಾರತೀಯ ರೈಲ್ವೇ ನಿರ್ವಹಣಾ ಸೇವೆಗೆ ಹೊಸದಾಗಿ ನೇಮಕಗೊಂಡ ಎಲ್ಲಾ ಅಧಿಕಾರಿಗಳು ಗತಿ ಶಕ್ತಿ ವಿಶ್ವವಿದ್ಯಾಲಯದಿಂದ ವಿನ್ಯಾಸಗೊಳಿಸಿದ ಅವರ ಪ್ರೊಬೇಷನರಿ ತರಬೇತಿಯನ್ನು ಪಡೆಯಲಿದ್ದಾರೆ ಎಂದು ಸಚಿವರು ಹೇಳಿದರು.

<><*<><>*><>

ಏಷ್ಯಾದ ಅತಿ ದೊಡ್ಡ ತಂತ್ರಜ್ಞಾನ ಶೃಂಗ - ಬೆಂಗಳೂರು ಟೆಕ್ ಸಮ್ಮಿಟ್‌ನ ೨೬ನೇ ಆವೃತ್ತಿಯನ್ನು ಬೆಂಗಳೂರಿನಲ್ಲಿ ನಿನ್ನೆ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿಯವರು, ಸಾಫ್ಟ್‌ವೇರ್, ಜೈವಿಕ ತಂತ್ರಜ್ಞಾನ ಮತ್ತು

ಏರೋಸ್ಪೇಸ್‌ನಲ್ಲಿ ಬೆಂಗಳೂರು ಜಾಗತಿಕ ಮನ್ನಣೆ ಪಡೆದಿರುವುದನ್ನು ಒತ್ತಿ ಹೇಳಿದರು. ಇದೇ ಸಂದರ್ಭದಲ್ಲಿ ಬೆಂಗಳೂರು, ಮೈಸೂರು ಮತ್ತು ಬೆಳಗಾವಿಯಲ್ಲಿ ಮೂರು ಜಾಗತಿಕ ನಾವೀನ್ಯತಾ ಕೇಂದ್ರಗಳನ್ನು ಸ್ಥಾಪಿಸುವುದಾಗಿ ಘೋಷಣೆ ಮಾಡಿದರು. ಜಾಗತಿಕ ಸೆಮಿ ಕಂಡಕ್ಟರ್ ಕೈಗಾರಿಕೆಗಳಿಗಾಗಿ ಮೈಸೂರಿನ ಬಳಿ ಎಲೆಕ್ಟ್ರಾನಿಕ್ಸ್ ಉತ್ಪಾದನಾ ಕ್ಲಸ್ಟರ್‌ಗಳನ್ನು ತೆರೆಯುವುದಾಗಿ ತಿಳಿಸಿದರು.

<><*<><>*><>

ಬಿಹಾರದ ರಾಜ್‌ಗೀರ್ ಹಾಕಿ ಕ್ರೀಡಾಂಗಣದಲ್ಲಿ ಇಂದು ಸಂಜೆ ೪.೪೫ಕ್ಕೆ ಭಾರತ ಮತ್ತು ಚೀನಾ ನಡುವೆ ಫೈನಲ್ ಪಂದ್ಯ ನಡೆಯಲಿದೆ. ನಿನ್ನೆ ನಡೆದ ಮಹಿಳೆಯರ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ-೨೦೨೪ ರ ಸೆಮಿಫೈನಲ್‌ನಲ್ಲಿ ಭಾರತ ೨-೦ ಗೋಲುಗಳಿಂದ ಜಪಾನ್ ತಂಡವನ್ನು ಸೋಲಿಸಿ ಫೈನಲ್ ಪ್ರವೇಶಿಸಿದೆ. ಭಾರತ, ಗುಂಪು ಹಂತದ ಎಲ್ಲಾ ಪಂದ್ಯಗಳನ್ನು ಗೆದ್ದು, ಸೆಮಿಫೈನಲ್ ಪ್ರವೇಶಿಸಿತ್ತು. ಗುಂಪು ಹಂತದ ಅಂತಿಮ ಪಂದ್ಯದಲ್ಲಿ ಭಾರತ ಮತ್ತು ಜಪಾನ್ ಮುಖಾಮುಖಿಯಾಗಿದ್ದು, ಆ ಪಂದ್ಯದಲ್ಲಿ ಆತಿಥೇಯರು ೩-೦ ಅಂತರದಲ್ಲಿ ಜಯ ಸಾಧಿಸಿದ್ದರು. ಮತ್ತೊಂದು ಸೆಮಿಫೈನಲ್ ಹಣಾಹಣಿಯಲ್ಲಿ ಚೀನಾ, ಮಲೇಷ್ಯಾವನ್ನು ೩-೧ ಗೋಲುಗಳಿಂದ ಸೋಲಿಸಿ ಫೈನಲ್‌ಗೆ ಪ್ರವೇಶಿಸಿದೆ. ಮತ್ತೊಂದೆಡೆ ಕಂಚಿನ ಪದಕಕ್ಕಾಗಿ ಮಲೇಷ್ಯಾ ಜಪಾನ್ ವಿರುದ್ಧ ಸೆಣಸಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧೨ ಕ್ಕೆ <>*><>